ಸಿಂಧನೂರು ಪಟ್ಟಣದಲ್ಲಿ ಶಿವಜ್ಯೋತಿ ಟೌನ್ ಶೇಫ್‌ನಲ್ಲಿ ಅವ್ಯವಹಾರ

1033 (1260) - ಶ್ರೀ ಹಂಪನಗೌಡ ಬಾದರ್ಲಿ (ಸಿಂಧನೂರು) ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಿಂಧನೂರು ಪಟ್ಟಣದಲ್ಲಿ ಸುಮಾರು 2-3 ಸಾವಿರ ಸದಸ್ಯರನ್ನು ಹೊಂದಿರುವ ಶಿವಜ್ಯೋತಿ ಟೌನ್‌ಸಿಫ್ ಪ್ರಮೋಟರ್ಸ್ ಎಂಬ ಸಂಸ್ಥೆಯು ಕಳೆದ ಎರಡು ವರ್ಷದಿಂದ ಕಂತುಗಳ ಮೂಲಕ ನಿವೇಶನ ನೀಡುವುದಾಗಿ ತಿಳಿಸಿದ್ದು, ಇದುವರೆಗೂ ನಿವೇಶನಗಳನ್ನು ಫಲಾನುಭವಿಗಳಿಗೆ ವಿತರಿಸದೇ ಅಲ್ಲಿ ಕೋಟ್ಯಾಂತರ ರೂಪಾಯಿಗಳ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಸಂಸ್ಥೆಯ ಮುಖ್ಯಸ್ಥರ ಹಾಗೂ ಸಂಬಂಧಿಸಿದ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮ ಏನು?

ಶ್ರೀ ಎಸ್. ಕುಮಾರ್ ಬಂಗಾರಪ್ಪ (ಪೌರಾಡಳಿತ ರಾಜ್ಯ ಸಚಿವರು) :

ಅ) ಶಿವಜ್ಯೋತಿ ಟೌನ್‌ಶಿಫ್ ಪ್ರಮೋಟರ್ಸ್ ಪ್ರೈವೇಟ್ ಲಿಮಿಟೆಡ್, ಇದು ಒಂದು ಖಾಸಗೀ ಸಂಸ್ಥೆಯಾಗಿದ್ದು, ಸದರಿ ಸಂಸ್ಥೆಯು ನಿವೇಶನಗಳನ್ನು ನೀಡುವುದಾಗಿ ಹೇಳಿ ಸಾರ್ವಜನಿಕರಿಂದ 2-3 ಕೋಟಿ ರೂ.ಗಳನ್ನು ಪಡೆದುಕೊಂಡು ನಿವೇಶನ ಹಂಚದಿರುವ ಬಗ್ಗೆ ಸದರಿ ಸಂಸ್ಥೆಯ ಮೇಲೆ ಕ್ರಮ ಕೈಗೊಳ್ಳುವುದು ನಗರಾಭಿವೃದ್ಧಿ ಇಲಾಖೆಯ ವ್ಯಾಪ್ತಿಗೆ ಬರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಸಿಂಧನೂರು ಪಟ್ಟಣಕ್ಕೆ ಕುಡಿಯುವ ನೀರಿನ ಯೋಜನೆ

1034 (1261) - ಶ್ರೀ ಹಂಪನಗೌಡ ಬಾದರ್ಲಿ (ಸಿಂಧನೂರು) ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಿಂಧನೂರು ಪಟ್ಟಣದ ಕುಡಿಯುವ ನೀರಿನ ಎರಡನೇ ಹಂತದ ಕಾಮಗಾರಿಗೆ ಸರ್ಕಾರದ ಮಂಜೂರಾತಿ ನೀಡಿದೆಯೇ?

ಆ) ಇದಕ್ಕಾಗಿ ಅಂದಾಜು ಪಟ್ಟಿ ತಯಾರಿಸಲಾಗಿದೆಯೇ? ಹಾಗಿದ್ದಲ್ಲಿ ಇದರ ಒಟ್ಟು ವೆಚ್ಚವೆಷ್ಟು?

ಇ) ಎಂದು ಮಂಜೂರಾತಿ ನೀಡಲಾಗುವುದು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :

ಅ) ಇಲ್ಲ.

ಆ) ಇದಕ್ಕಾಗಿ ರೂ. 2940.00 ಲಕ್ಷಗಳ ರೇಖಾ ಅಂದಾಜನ್ನು ತಯಾರಿಸಲಾಗಿದೆ.

ಇ) ಈ ಯೋಜನೆಗೆ ವಿವರವಾದ ಅಂದಾಜು ಪಟ್ಟಿಯನ್ನು ತಯಾರಿಸಲು ಅವಶ್ಯಕವಿರುವ ಸರ್ವೆ ಕೆಲಸಕ್ಕೆ ತಗಲಬಹುದಾದ ಅಂದಾಜು ವೆಚ್ಚ ರೂ. 12.00 ಲಕ್ಷಗಳನ್ನು ಭರಿಸಲು ಸಾಧ್ಯವಿಲ್ಲವೆಂದು ಪುರಸಭೆ, ಸಿಂಧನೂರು ಇವರು ತಿಳಿಸಿರುವುದರಿಂದ ಸದರಿ ಹಣವನ್ನು ಯಾವ ಮೂಲದಿಂದ ಬಿಡುಗಡೆ ಮಾಡಬೇಕು ಎನ್ನುವ ಬಗ್ಗೆ ನಿರ್ಧಾರ ತೆಗೆದುಕೊಂಡು ನಂತರ ಸವಿವರ ಅಂದಾಜು ಪಟ್ಟಿಯನ್ನು ತಯಾರಿಸಿ ಮುಂದಿನ ಕ್ರಮ ಜರುಗಿಸಲಾಗುವುದು.